All India Radio: Bangalore
National Bulletin In Kannada
**ರಾಷ್ಟ್ರೀಯ ವಾರ್ತೆಗಳು**
31.01.2025 13.10hrs

**ಮುಖ್ಯಾಂಶಗಳು :**

1. ದೇಶದ ಬಡವರು, ಮಹಿಳೆಯರು, ರೈತರ ಸರ್ವಾಂಗೀಣ ಅಭಿವೃದ್ಧಿಗೆ ಹಲವು ಯೋಜನೆ ಜಾರಿ; ಸಂಸತ್ತಿನ ಜಂಟಿ ಅಧಿವೇಶನದಲ್ಲಿ ರಾಷ್ಟ್ರಪತಿ ಪ್ರತಿಪಾದನೆ
2. ಒಂದು ರಾಷ್ಟ್ರ - ಒಂದು ಚುನಾವಣೆ, ವಕ್ಫ್ ತಿದ್ದುಪಡಿ ಮಸೂದೆ ಜಾರಿಗೆ ಕೇಂದ್ರ ಸರ್ಕಾರದಿಂದ ಅಗತ್ಯ ಕ್ರಮ - ದ್ರೌಪದಿ ಮುರ್ಮು
3. ವಿಕಸಿತ ಭಾರತದ ಕನಸು ನನಸಾಗಿಸಲು ಪ್ರತಿಯೊಬ್ಬ ಸಂಸದರ ಕೊಡುಗೆ ಅತ್ಯಗತ್ಯ - ಪ್ರಧಾನಿ ನರೇಂದ್ರ ಮೋದಿ
4. ೧೯ ವರ್ಷದೊಳಗಿನ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್; ಎರಡನೇ ಸೆಮಿಫೈನಲ್‌ನಲ್ಲಿಂದು ಭಾರತ-ಇಂಗ್ಲೆಂಡ್ ಮುಖಾಮುಖಿ

********

ಬಡವರು ಮಹಿಳೆಯರು ಮತ್ತು ರೈತರ ಅಭಿವೃದ್ಧಿಗೆ ತಮ್ಮ ಸರ್ಕಾರ ಬದ್ಧವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ. ಸಂಸತ್ತಿನ ಬಜೆಟ್ ಅಧಿವೇಶನದ ಆರಂಭದ ಮೊದಲ ದಿನವಾದ ಇಂದು ಸಂಸತ್ತಿನ ಉಭಯ ಸದನಗಳ ಜಂಟಿ ಅಧಿವೇಶನ ಉದ್ದೇಶಿಸಿ ಇಂದು ಭಾಷಣ ಮಾಡಿದ ರಾಷ್ಟ್ರಪತಿ, ಸಬ್ ಕಾ ಸಾತ್, ಸಬ್ ಕಾ ವಿಕಾಸ್ ಮಂತ್ರದಲ್ಲಿ ಸರ್ಕಾರಕ್ಕೆ ಸಂಪೂರ್ಣ ವಿಶ್ವಾಸವಿದ್ದು, ದೇಶದ ಸರ್ವಾಂಗೀಣ ಅಭಿವೃದ್ಧಿ ಹಾಗೂ ಜನರ ಕಲ್ಯಾಣಕ್ಕೆ ಹತ್ತು ಹಲವು ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದರು.

ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿರುವುದು ಸಂತಸದ ವಿಷಯವಾಗಿದೆ. ಯುದ್ಧ ವಿಮಾನಗಳು, ಪೊಲೀಸ್ ಇಲಾಖೆ ಮತ್ತು ದೇಶದ ಪ್ರಮುಖ ಕಾರ್ಪೋರೇಟ್ ಸಂಸ್ಥೆಗಳಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಸಕ್ರಿಯವಾಗಿರುವುದು ಶ್ಲಾಘನೀಯ ಒಲಂಪಿಕ್ ಕ್ರೀಡೆಗಳಲ್ಲಿ ನಮ್ಮ ಹೆಣ್ಣು ಮಕ್ಕಳು ಹೆಚ್ಚಿನ ಪದಕಗಳನ್ನು ಗಳಿಸುವ ಮೂಲಕ ದೇಶದ ಗರಿಮೆಯನ್ನು ಹೆಚ್ಚಿಸಿದ್ದಾರೆ ಎಂದರು. ಮಧ್ಯಮ ವರ್ಗದವರ ಆಶೋತ್ತರಗಳನ್ನು ಈಡೇರಿಸಲು ಸರ್ಕಾರ ಬದ್ಧವಾಗಿದ್ದು, ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಈಗಾಗಲೇ ಮೂರು ಕೋಟಿ ಪಕ್ಕಾ ಮನೆಗಳನ್ನು ನಿರ್ಮಿಸಲು ಕಾರ್ಯಯೋಜನೆ ರೂಪಿಸಲಾಗಿದೆ. ಮೂರು ಕೋಟಿ ಮಹಿಳೆಯರನ್ನು ಲಕ್‌ಪತಿ ದೀದಿಗಳನ್ನಾಗಿ ಪರಿವರ್ತಿಸಲು ಸರ್ಕಾರ ಮುಂದಾಗಿದೆ ಎಂದರು. ಡಿಜಿಟಲ್ ತಂತ್ರಜ್ಞಾನದಲ್ಲಿ ಭಾರತ ಜಾಗತಿಕ ಭೂಪಟದಲ್ಲಿ ತನ್ನದೇ ಚಾಪು ಮೂಡಿಸಿದೆ. ಯುಪಿಐ ಚಲಾವಣೆ ವ್ಯವಸ್ಥೆಯಲ್ಲಿ ಭಾರತ ಮುಂಚೂಣಿಯಲ್ಲಿದ್ದು, ವಿಶ್ವದ ಇತರ ಅಭಿವೃದ್ಧಿ ಹೊಂದಿದ ದೇಶಗಳ ಸಾಲಿನಲ್ಲಿ ನಿಂತಿದೆ. ಸಾಮಾಜಿಕ ನ್ಯಾಯ ಮತ್ತು ಸಮಾನತೆ ಕಾಯ್ದುಕೊಳ್ಳಲು ಡಿಜಿಟಲ್ ತಂತ್ರಜ್ಞಾನವನ್ನು ಸಾಧನವನ್ನಾಗಿ ಬಳಸಲು ಸರ್ಕಾರ ಮುಂದಾಗಿದೆ ಎಂದರು. ಸರ್ಕಾರ ಆರೋಗ್ಯ ಮತ್ತು ಶಿಕ್ಷಣಕ್ಕೆ ಒತ್ತು ನೀಡಿದೆ. ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಆದ್ಯತೆ ನೀಡಿದೆ. ಒಂದು ದೇಶ ಒಂದು ಚುನಾವಣೆ ಮತ್ತು ವಕ್ಫ್ ತಿದ್ದುಪಡಿ ಮಸೂದೆ ಜಾರಿಗೆ ಸರ್ಕಾರ ಈಗಾಗಲೇ ಕ್ರಮ ಕೈಗೊಂಡಿದೆ ಎಂದು ಅವರು ಹೇಳಿದರು.

ನಮ್ಮದೇ ಆದ ಸಂವಿಧಾನವನ್ನು ಅಳವಡಿಸಿಕೊಂಡು ೭೫ ವರ್ಷಗಳಾಗಿದೆ. ಇತ್ತೀಚೆಗಷ್ಟೆ ಸಂವಿಧಾನ ಅಳವಡಿಕೆಯ ೭೫ ವರ್ಷಾಚರಣೆಯನ್ನು ಸಂಭ್ರಮದಿಂದ ಮಾಡಲಾಗಿದೆ. ನಮ್ಮ ಸಂವಿಧಾನವನ್ನು ರಚನೆ ಮಾಡಿರುವ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಸಂವಿಧಾನ ಸಮಿತಿಯಲ್ಲಿನ ಇತರ ಹಿರಿಯರಿಗೆ ನನ್ನ ನಮನಗಳನ್ನು ತಿಳಿಸುತ್ತೇನೆ ಎಂದರು. ದೇಶದ ಎರಡು ಕೋಟಿ ೨೫ ಲಕ್ಷ ಜನರಿಗೆ ಜನಸ್ವಾಮಿತ್ವ

ಕಾರ್ಡ್‌ಗಳನ್ನು ವಿತರಣೆ ಮಾಡಲಾಗಿದೆ. ಆಯುಷ್ಮಾನ್ ಭಾರತ್ ಯೋಜನೆಯಡಿ ೭೦ ವರ್ಷ ತುಂಬಿದ ೬ ಕೋಟಿ ಹಿರಿಯ ಜೀವಗಳಿಗೆ ಆರೋಗ್ಯ ವಿಮೆ ಒದಗಿಸಲು ಸರ್ಕಾರ ನಿರ್ಧರಿಸಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದರು. ಬುಡಕಟ್ಟು ಸಮುದಾಯದ ಐದು ಕೋಟಿ ಜನರಿಗೆ ಧರ್ತಿ ಅಬಾ ಜನ್‌ಜಾತೀಯ ಗ್ರಾಮ ಉತ್ಕರ್ಷ್ ಅಭಿಯಾನವನ್ನು ಸರ್ಕಾರ ಆರಂಭಿಸಿದ್ದು, ಈ ಸಮುದಾಯದ ಅಭಿವೃದ್ಧಿಗೆ ವಿಶೇಷ ಒತ್ತು ನೀಡುತ್ತಿದೆ ಎಂದು ಹೇಳಿದರು. ಪ್ರಯಾಗ್‌ರಾಜ್‌ನಲ್ಲಿ ಐತಿಹಾಸಿಕ ಮಹಾಕುಂಭ ಮೇಳ ನಡೆಯುತ್ತಿದ್ದು, ಇದು ನಮ್ಮ ಸಂಸ್ಕೃತಿ ಮತ್ತು ಸಾಮಾಜಿಕ ಜಾಗೃತಿಯ ಉತ್ಸವವಾಗಿದೆ. ದೇಶ-ವಿದೇಶಗಳಿಂದ ಕೋಟ್ಯಾಂತರ ಭಕ್ತರು ಪುಣ್ಯಸ್ನಾನ ಮಾಡುತ್ತಿದ್ದಾರೆ. ಮೊನ್ನೆ ಮೌನಿ ಅಮಾವಾಸ್ಯೆ ದಿನದಂದು ಕಾಲ್ತುಳಿತ ಪ್ರಕರಣದಲ್ಲಿ ಮೃತಪಟ್ಟವರಿಗೆ ಸಂತಾಪ ಸೂಚಿಸುವುದಾಗಿ ರಾಷ್ಟ್ರಪತಿ ತಿಳಿಸಿದರು. ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಅವರು ಹಾರೈಸಿದರು. ಇದಕ್ಕೂ ಮುನ್ನ ಸಂಸತ್ತಿನ ನೂತನ ಭವನದಲ್ಲಿನ ಲೋಕಸಭಾ ಸಭಾಂಗಣಕ್ಕೆ ಆಗಮಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಉಪರಾಷ್ಟ್ರಪತಿಯೂ ಆಗಿರುವ ರಾಜ್ಯಸಭೆಯ ಸಭಾಪತಿ ಜಗದೀಪ್ ಧನ್‌ಕರ್, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಪ್ರಧಾನಿ ನರೇಂದ್ರ ಮೋದಿ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಸಾಂಪ್ರದಾಯಿಕವಾಗಿ ಸ್ವಾಗತಿಸಿದರು.

********

ದೇಶದ ಆಡಳಿತ ನಡೆಸಲು ಜನತೆ ಮೂರನೇ ಬಾರಿಗೆ ತಮ್ಮ ಸರ್ಕಾರಕ್ಕೆ ಜವಾಬ್ದಾರಿ ನೀಡಿದೆ ಮತ್ತು ಈ ಅವಧಿಯ ಮೊದಲ ಪರಿಪೂರ್ಣ ಬಜೆಟ್ ಮಂಡನೆಯಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಂಸತ್ತಿನ ಬಜೆಟ್ ಅಧಿವೇಶನ ಆರಂಭಕ್ಕೆ ಮುನ್ನ ನೂತನ ಸಂಸತ್ ಭವನದ ಮುಂದೆ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರಧಾನಿ, ಭಾರತ ಸ್ವಾತಂತ್ರ್ಯ ಗಳಿಸಿ ೨೦೪೭ಕ್ಕೆ ನೂರು ವರ್ಷಗಳನ್ನು ಪೂರೈಸಲಿದ್ದು, ಆ ವೇಳೆಗೆ ವಿಕಸಿತ ಭಾರತ ಕನಸು ನನಸಾಗಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು. ಈ ಬಾರಿಯ ಬಜೆಟ್ ದೇಶಕ್ಕೆ ಹೊಸ ಶಕ್ತಿ ಮತ್ತು ಭರವಸೆಗಳನ್ನು ನೀಡಲಿದೆ. ಪ್ರಜಾಸತ್ತಾತ್ಮಕ ರಾಷ್ಟ್ರವಾಗಿ ಭಾರತ ೭೫ ವರ್ಷಗಳನ್ನು ಪೂರೈಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಆ ಮೂಲಕ ಜಾಗತಿಕ ಭೂಪಟದಲ್ಲಿ ತನ್ನದೇ ಆದ ಸ್ಥಾನವನ್ನು ಗುರುತಿಸಿಕೊಂಡಿದೆ ಎಂದು ಹೇಳಿದರು. ಭಾರತವನ್ನು ಅಭಿವೃದ್ಧಿ ಹೊಂದಿದ ದೇಶವನ್ನಾಗಿ ಮಾಡಲು ಪ್ರತಿಯೊಬ್ಬ ಸಂಸದರು ತಮ್ಮದೇ ಆದ ಕೊಡುಗೆ ನೀಡಬೇಕೆಂದು ಪ್ರಧಾನಿ ನರೇಂದ್ರ ಮೋದಿ ಮನವಿ ಮಾಡಿದರು.

********

೨೦೨೫-೨೬ನೇ ಸಾಲಿನ ಕೇಂದ್ರ ಬಜೆಟ್ ನಾಳೆ, ಶನಿವಾರ ಲೋಕಸಭೆಯಲ್ಲಿ ಮಂಡನೆಯಾಗಲಿದೆ. ಕೇಂದ್ರ ಬಜೆಟ್ ಮಂಡನೆಯ ಕಾರ್ಯಕಲಾಪವನ್ನು ಕರ್ನಾಟಕದಲ್ಲಿನ ಎಲ್ಲಾ ಆಕಾಶವಾಣಿ ಕೇಂದ್ರಗಳು ನೇರಪ್ರಸಾರ ಮಾಡಲಿವೆ. ಈ ಹಿನ್ನೆಲೆಯಲ್ಲಿ ನಾಳೆ ಮಧ್ಯಾಹ್ನದ ರಾಷ್ಟ್ರೀಯ ವಾರ್ತೆಗಳು ೧.೧೦ರ ಬದಲಾಗಿ ೧.೫೦ಕ್ಕೆ ಪ್ರಸಾರವಾಗಲಿದೆ. ಅದೇ ರೀತಿ ಮಧ್ಯಾಹ್ನ ೨.೩೦ರ ರಿಂದ ೨.೪೦ರವರೆಗೆ ಪ್ರಸಾರವಾಗುತ್ತಿದ್ದ ಪ್ರದೇಶ ಸಮಾಚಾರದ ಅವಧಿಯನ್ನು ಐದು ನಿಮಿಷಗಳ ಕಾಲ ವಿಸ್ತರಣೆ ಮಾಡಿ ೨.೩೦ ರಿಂದ ೨.೪೫ರವರೆಗೆ ಪ್ರಸಾರವಾಗಲಿದೆ. ಕೇಂದ್ರ ಬಜೆಟ್ ಕುರಿತು ನಾಳೆ ರಾತ್ರಿ ೭.೪೫ ರಿಂದ ೮.೪೫ರ ತನಕ, ಆಕಾಶವಾಣಿ ಬೆಂಗಳೂರು ಪ್ರಾದೇಶಿಕ ಸುದ್ದಿ ವಿಭಾಗ ಪ್ರಸ್ತುತಪಡಿಸುವ ನೇರ ಚರ್ಚೆ ಮೂಡಿಬರಲಿದೆ.

********

ದೆಹಲಿ ವಿಧಾನಸಭಾ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇನ್ನು ಕೇವಲ ನಾಲ್ಕು ದಿನಗಳು ಬಾಕಿ ಉಳಿದಿರುವಂತೆ ಎಲ್ಲಾ ರಾಜಕೀಯ ಪಕ್ಷಗಳ ನಾಯಕರು ತಮ್ಮ ತಮ್ಮ ಅಭ್ಯರ್ಥಿಗಳ ಪರವಾಗಿ ಬಿರುಸಿನ ಪ್ರಚಾರ ಕೈಗೊಂಡಿದ್ದಾರೆ. ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಇಂದು ಮಧ್ಯಾಹ್ನ ದ್ವಾರಕ ಪ್ರದೇಶದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಉತ್ತರಾಖಂಡ್ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ, ಹರಿಯಾಣ ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ, ಕೇಂದ್ರ ಸಚಿವ ನಿತಿನ್ ಗಡ್ಕರಿ, ಉತ್ತರ ಪ್ರದೇಶದ ಉಪಮುಖ್ಯಮಂತ್ರಿ ಕೇಶವ್ ಪ್ರಸಾದ್ ಮೌರ್ಯ ಮತ್ತು ಬಿಹಾರದ

ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಸೇರಿದಂತೆ ಇತರೆ ಬಿಜೆಪಿ ನಾಯಕರು ರಾಷ್ಟ್ರ ರಾಜಧಾನಿಯಲ್ಲಿ ಮತಯಾಚನೆ ಮಾಡಲಿದ್ದಾರೆ. ಈ ನಡುವೆ, ಆಮ್ ಆದ್ಮಿ ಪಕ್ಷದ ಸಂಚಾಲಕ ಅರವಿಂದ್ ಕೇಜ್ರಿವಾಲ್, ಪಕ್ಷದ ಹಿರಿಯ ನಾಯಕ ಹಾಗೂ ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್, ಸಂಸದ ಸಂಜಯ್ ಸಿಂಗ್ ಮತ್ತಿತರರು ವಿವಿಧೆಡೆ ಸಾರ್ವಜನಿಕ ಸಭೆಗಳ ಮೂಲಕ ಮತಯಾಚನೆ ಮಾಡಲಿದ್ದಾರೆ. ಹಿರಿಯ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಮಾದಿಪುರ್ ಪ್ರದೇಶದಲ್ಲಿ ರ್‍ಯಾಲಿಯಲ್ಲಿ ಭಾಗವಹಿಸಲಿದ್ದು, ಆ ಪಕ್ಷದ ಸಂಸದೆ ಪ್ರಿಯಾಂಕ ಗಾಂಧಿ ವಾದ್ರಾ ನಂಗ್ಲೋಯಿ ಮತ್ತು ಮುಸ್ತಾಫಾಬಾದ್‌ನಲ್ಲಿ ನಡೆಯಲಿರುವ ರ್‍ಯಾಲಿ ಮತ್ತು ರೋಡ್ ಶೋನಲ್ಲಿ ಪಾಲ್ಗೊಳ್ಳಲಿದ್ದಾರೆ. ದೆಹಲಿ ವಿಧಾನಸಭೆಗೆ ಫೆಬ್ರವರಿ ೫ ರಂದು ಚುನಾವಣೆ ನಡೆಯಲಿದ್ದು, ೮ ರಂದು ಮತ ಎಣಿಕೆ ನಡೆಯಲಿದೆ.

********

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳದಲ್ಲಿ ಮೊನ್ನೆ ಸಂಭವಿಸಿದ ಕಾಲ್ತುಳಿತ ಘಟನೆ ಕುರಿತು ತನಿಖೆ ನಡೆಸಲು ನೇಮಕಗೊಂಡಿರುವ ನ್ಯಾಯಾಂಗ ಆಯೋಗ ಇಂದು ತ್ರಿವೇಣಿ ಸಂಗಮಕ್ಕೆ ಭೇಟಿ ನೀಡಲಿದೆ.

********

ಕೌಲಾಲಂಪುರದ ಬಯುಮಾಸ್ ಓವಲ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ೧೯ ವರ್ಷದೊಳಗಿನವರ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಎರಡನೇ ಸೆಮಿಫೈನಲ್ ಪಂದ್ಯದಲ್ಲಿಂದು ಭಾರತ ಹಾಗೂ ಇಂಗ್ಲೆಂಡ್ ವನಿತೆಯರ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ಇಂಗ್ಲೆಂಡ್ ತಂಡ, ಇತ್ತೀಚಿನ ವರದಿ ಬಂದಾಗ ೧೯.೫ ಓವರ್ ಗಳಲ್ಲಿ, ೮ ವಿಕೆಟ್ ನಷ್ಟಕ್ಕೆ, ೧೧೨ ರನ್ ಮಾಡಿ ಆಡುತ್ತಿದೆ. ಇಂದು ಬೆಳಿಗ್ಗೆ ಇದೇ ಕ್ರೀಡಾಂಗಣದಲ್ಲಿ ನಡೆದ ಮೊದಲನೇ ಸೆಮಿಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾದ ವನಿತೆಯರ ತಂಡ, ಆಸ್ಟ್ರೇಲಿಯಾ ವಿರುದ್ಧ ೫ ವಿಕೆಟ್‌ಗಳಿಂದ ಜಯ ಸಾಧಿಸಿ ಫೈನಲ್ ಗೆ ಲಗ್ಗೆ ಇಟ್ಟಿದೆ. ಫೆಬ್ರುವರಿ ೨ ರಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಪ್ರಸ್ತುತ ನಡೆಯುತ್ತಿರುವ ಎರಡನೇ ಸೆಮಿಫೈನಲ್‌ನ ಜಯಶಾಲಿ ತಂಡದೊಂದಿಗೆ ಟ್ರೋಫಿಗಾಗಿ ಸೆಣಸಾಟ ನಡೆಸಲಿದೆ.

****END****